ಕರ್ನಾಟಕ ಸರ್ಕಾರ

ನಿರ್ದೇಶಕರ ಕಚೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560012.

Email: commissioner.pue@gmail.com Phone No. 080-23562033

ಸಂಖ್ಯೆಃ ಪಪೂಶಿಇ/187/ಸಿಬ್ಬಂದಿ/ಸಿಆರ್-3/ಉನೇ/2015-16(ಹೆ.ಆ) ದಿನಾಂಕಃ 17 -09-2022.

## ಜ್ಞಾಪನ

ವಿಷಯ:- ದಿನಾಂಕ:01-09-2022ರಂದು ಪ್ರಕಟಿಸಲಾದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಹುದ್ದೆಯ ಪರಿಷ್ಕೃತ ಹೆಚ್ಚುವರಿ ಆಯ್ಕೆಪಟ್ಟಿಗೆ ಸ್ವೀಕೃತಗೊಂಡ ಆಕ್ಷೇಪಣೆಗಳ ಬಗ್ಗೆ.

ಉಲ್ಲೇಖ:-
1. ಈ ಕಚೇರಿ ಸಮಸಂಖ್ಯೆ ಪಟ್ಟಿ ದಿನಾಂಕ: 22-08-2022.
2. ಈ ಕಚೇರಿ ಸಮಸಂಖ್ಯೆ ಜ್ಞಾಪನ ದಿನಾಂಕ:26-08-2022
3. ಈ ಕಚೇರಿ ಸಮಸಂಖ್ಯೆ ಜ್ಞಾಪನ ದಿನಾಂಕ:01-09-2022.

-*-

ಪದವಿ ಪೂರ್ವ ಶಿಕ್ಷಣ ಇಲಾಖೆಯ ಸರ್ಕಾರಿ ಪದವಿ ಪೂರ್ವ ಕಾಲೇಜಿನ ವಿವಿಧ ವಿಷಯಗಳ ಉಪನ್ಯಾಸಕರ ಹುದ್ದೆಗೆ ಹೆಚ್ಚುವರಿ ಆಯ್ಕೆಪಟ್ಟಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳ ದಾಖಲೆಗಳ ಪರಿಶೀಲನೆ ಪಟ್ಟಿಯನ್ನು ಉಲ್ಲೇಖ-1 ರಂತೆ ಪ್ರಕಟಿಸಲಾಗಿತ್ತು. ಸದರಿ ಪಟ್ಟಿಗೆ ಅಭ್ಯರ್ಥಿಗಳಿಂದ ಆಕ್ಷೇಪಣೆಗಳು ಸ್ವೀಕೃತಗೊಂಡ ಹಿನ್ನಲೆಯಲ್ಲಿ, ಉಲ್ಲೇಖ-1 ರ ಪಟ್ಟಿಯನ್ನು ಉಲ್ಲೇಖ-2ರಂತೆ ಹಿಂಪಡೆದು ಪರಿಷ್ಕೃತ ಹೆಚ್ಚುವರಿ ಆಯ್ಕೆಪಟ್ಟಿಯನ್ನು ಶೀಘ್ರದಲ್ಲೇ ಪ್ರಕಟಿಸಲಾಗುವುದೆಂದು ತಿಳಿಸಲಾಗಿತ್ತು. ಉಲ್ಲೇಖ-3ರ ಜ್ಞಾಪನ ದಿನಾಂಕ: 01-09-2022ರಲ್ಲಿ ಪರಿಷ್ಕೃತ ಪಟ್ಟಿಯನ್ನು ಪ್ರಕಟಿಸಿ, ಸದರಿ ಪಟ್ಟಿಗೆ ಅಭ್ಯರ್ಥಿಗಳಿಂದ ಆಕ್ಷೇಪಣೆಗಳೇನಾದರೂ ಇದ್ದಲ್ಲಿ, ದಿನಾಂಕ: 08-09-2022ರ ಸಂಜೆ:05-30ರ ಒಳಗಾಗಿ ಸಲ್ಲಿಸಲು ಸೂಚಿಸಲಾಗಿತ್ತು. ಅದರಂತೆ, ಅಭ್ಯರ್ಥಿಗಳು ನಿಗದಿಪಡಿಸಿದ ದಿನಾಂಕದೊಳಗೆ ಸಲ್ಲಿಸಿರುವ ಎಲ್ಲಾ ಆಕ್ಷೇಪಣೆಗಳನ್ನು ಪರಿಶೀಲಿಸಿ, ನಿಯಮಾನುಸಾರ ಪರಿಗಣಿಸಿ, ಪರಿಷ್ಕೃತ ಹೆಚ್ಚುವರಿ ಆಯ್ಕೆಪಟ್ಟಿಯನ್ನು ಪ್ರಕಟಿಸಲಾಗಿರುತ್ತದೆ. ಆಕ್ಷೇಪಣೆಗಳ ಪಟ್ಟಿಯನ್ನು ಷರಾದೊಂದಿಗೆ ಈ ಆದೇಶದೊಂದಿಗೆ ಲಗತ್ತಿಸಿ, ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಿದೆ.

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.

ರವರಿಗೆ:

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, 6ನೇ ಮಹಡಿ. ಬಹುಮಹಡಿ ಕಟ್ಟಡ, ಬೆಂಗಳೂರು – 560 001.
2. ಕಾರ್ಯನಿರ್ವಾಹಕ ಅಧಿಕಾರಿಗಳು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, 18ನೇ ಅಡ್ಡರಸ್ತೆ, ಮಲ್ಲೇಶ್ವರ, ಬೆಂಗಳೂರು – 560 012.
3. ಸಹಾಯಕ ನಿರ್ದೇಶಕರು, ಇ-ಆಡಳಿತ ಶಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು, ಇವರಿಗೆ- ಇಲಾಖಾ ಜಾಲತಾಣದಲ್ಲಿ ಪ್ರಕಟಿಸಲು.
4. ಸಂಬಂಧಿಸಿದ ಅಭ್ಯರ್ಥಿಗಳಿಗೆ.
5. ಕಚೇರಿ ಪ್ರತಿ.